# All India Radio: Bangalore
# National Bulletin In Kannada
## ಆಕಾಶವಾಣಿ, ಬೆಂಗಳೂರು
## ರಾಷ್ಟ್ರೀಯ ವಾರ್ತೆಗಳು

27.11.2025 19.35PM

***************

ಮುಖ್ಯಾಂಶಗಳು

- ಪ್ರಧಾನಿ ನರೇಂದ್ರ ಮೋದಿ ನಾಳೆ ಕರ್ನಾಟಕ, ಗೋವಾ ಭೇಟಿ; ಉಡುಪಿ ಕೃಷ್ಣ ಮಠ, ಗೋವಾದ ಪರ್ತಗಾಲಿ ಮಠಗಳ ಕಾರ್ಯಕ್ರಮಗಳಲ್ಲಿ ಭಾಗಿ
- ವಿಶೇಷಚೇತನರ ವಿರುದ್ಧ ಅವಹೇಳನಕಾರಿ ಹೇಳಿಕೆ ನಿಯಂತ್ರಿಸಲು ಕಠಿಣ ಕಾನೂನು ರೂಪಿಸಲು ಕೇಂದ್ರ ಸರ್ಕಾರಕ್ಕೆ ಸುಪ್ರೀಂಕೋರ್ಟ್ ಸಲಹೆ
- ಖಾಸಗಿ ಕಂಪನಿಗಳಿಗೆ ಪರಮಾಣು ವಲಯವನ್ನು ಮುಕ್ತವಾಗಿಸಲು ಕೇಂದ್ರ ಸರ್ಕಾರ ಚಿಂತನೆ
- ಬಂಗಾಳ ಕೊಲ್ಲಿಯಲ್ಲಿ ವಾಯುಭಾರ ಕುಸಿತ; ತೀವ್ರಗೊಂಡ ದಿತ್ವಾ ಚಂಡಮಾರುತ, ರಾಜ್ಯದ ಹಲವೆಡೆ ಮಳೆ ನಿರೀಕ್ಷೆ

***************

ಪ್ರಧಾನಿ ನರೇಂದ್ರ ಮೋದಿ ನಾಳೆ ಕರ್ನಾಟಕ ಮತ್ತು ಗೋವಾಕ್ಕೆ ಭೇಟಿ ನೀಡಲಿದ್ದಾರೆ.

ಕರ್ನಾಟಕದ ಉಡುಪಿಯಲ್ಲಿರುವ ಶ್ರೀ ಕೃಷ್ಣ ಮಠಕ್ಕೆ ಭೇಟಿ ನೀಡಿ ಲಕ್ಷ ಕಂಠ ಗೀತಾ ಪಾರಾಯಣ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಕೃಷ್ಣ ಗರ್ಭಗುಡಿಯ ಮುಂಭಾಗದಲ್ಲಿರುವ ಸುವರ್ಣ ತೀರ್ಥ ಮಂಟಪವನ್ನು ಉದ್ಘಾಟಿಸಿ, ಪವಿತ್ರ ಕನಕನ ಕಿಂಡಿಗೆ ಕನಕ ಕವಚವನ್ನು ಅರ್ಪಿಸಲಿದ್ದಾರೆ.

ನಂತರ ಪ್ರಧಾನಮಂತ್ರಿ, ಗೋವಾದಲ್ಲಿ ಸಂಸ್ಥಾನ ಗೋಕರ್ಣ ಪರ್ತಗಾಲಿ ಜೀವೋತ್ತಮ ಮಠದ ೫೫೦ ನೇ ವಾರ್ಷಿಕೋತ್ಸವದಲ್ಲಿ ಭಾಗವಹಿಸಲಿದ್ದಾರೆ. ಮಠದಲ್ಲಿ ಕಂಚಿನಿಂದ ಮಾಡಲ್ಪಟ್ಟ ೭೭ ಅಡಿ ಎತ್ತರದ ರಾಮನ ಪ್ರತಿಮೆಯನ್ನು ಅನಾವರಣಗೊಳಿಸಲಿದ್ದಾರೆ ಮತ್ತು ರಾಮಾಯಣ ಥೀಮ್ ಪಾರ್ಕ್ ಉದ್ಯಾನವನ್ನು ಉದ್ಘಾಟಿಸಲಿದ್ದಾರೆ. ಈ ಸಂದರ್ಭದಲ್ಲಿ ವಿಶೇಷ ಅಂಚೆ ಚೀಟಿ ಮತ್ತು ಸ್ಮರಣಾರ್ಥ ನಾಣ್ಯವನ್ನು ಬಿಡುಗಡೆ ಮಾಡಲಿದ್ದಾರೆ.

***************

ವಿಶೇಷಚೇತನರ ವಿರುದ್ಧದ ಅವಹೇಳನಕಾರಿ ಹೇಳಿಕೆಗಳನ್ನು ನಿಯಂತ್ರಿಸಲು ಕಠಿಣ ಕಾನೂನನ್ನು ರೂಪಿಸುವ ಬಗ್ಗೆ ಚಿಂತನೆ ನಡೆಸುವಂತೆ ಸುಪ್ರೀಂ ಕೋರ್ಟ್ ಕೇಂದ್ರ ಸರ್ಕಾರಕ್ಕೆ ಸಲಹೆ ಮಾಡಿದೆ.

ವಿಶೇಷಚೇತನರ ಘನತೆಯನ್ನು ರಕ್ಷಿಸಲು ಕಠಿಣ ಕಾನೂನಿನ ಅಗತ್ಯವನ್ನು ಎತ್ತಿ ತೋರಿಸಿದ ಸುಪ್ರೀಂಕೋರ್ಟ್, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಕಾಯ್ದೆಯ ರೀತಿಯಲ್ಲಿಯೇ ವಿಶೇಷಚೇತನರ ಮತ್ತು ಅಪರೂಪದ ಆನುವಂಶಿಕ ಅಸ್ವಸ್ಥತೆಗಳನ್ನು ಅಪಹಾಸ್ಯ ಮಾಡುವ ಅವಹೇಳನಕಾರಿ ಹೇಳಿಕೆಗಳನ್ನು ದಂಡನಾರ್ಹ ಅಪರಾಧವೆಂದು ಪರಿಗಣಿಸಲು ಕಾನೂನನ್ನು ರೂಪಿಸುವುದನ್ನು ಪರಿಗಣಿಸುವಂತೆ ಇಂದು ಕೇಂದ್ರ ಸರ್ಕಾರವನ್ನು ಕೇಳಿದೆ.

ಮುಖ್ಯ ನ್ಯಾಯಮೂರ್ತಿ ಸೂರ್ಯ ಕಾಂತ್ ಮತ್ತು ನ್ಯಾಯಮೂರ್ತಿ ಜೋಯ್ಮಲ್ಯ ಬಾಗ್ಚಿ ಅವರನ್ನೊಳಗೊಂಡ ಪೀಠವು, ಆನ್‌ಲೈನ್ ವೇದಿಕೆಗಳಲ್ಲಿ ಅಶ್ಲೀಲ, ಆಕ್ರಮಣಕಾರಿ ಅಥವಾ

ಕಾನೂನುಬಾಹಿರ ವಿಷಯವನ್ನು ನಿಯಂತ್ರಿಸಲು ತಟಸ್ಥ, ಸ್ವತಂತ್ರ ಮತ್ತು ಸ್ವಾಯತ್ತ ಸಂಸ್ಥೆಯ ಅವಶ್ಯಕತೆಯಿದೆ ಎಂದು ಹೇಳಿದೆ.

***************

ಖಾಸಗಿ ಕಂಪನಿಗಳಿಗೆ ಪರಮಾಣು ವಲಯವನ್ನು ಮುಕ್ತವಾಗಿಸಲು ಸರ್ಕಾರ ಚಿಂತಿಸುತ್ತಿದೆ. ಬಾಹ್ಯಾಕಾಶ ಕ್ಷೇತ್ರದಲ್ಲಿ ಖಾಸಗಿ ಸಂಸ್ಥೆಗಳ ಪಾಲ್ಗೊಳ್ಳುವಿಕೆ, ಸುಧಾರಣೆಗಳ ವ್ಯಾಪ್ತಿ ನಿರಂತರವಾಗಿ ಹೆಚ್ಚುತ್ತಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ.

ನವದೆಹಲಿಯಿಂದ ವಿಡಿಯೋ ಕಾನ್ಫರೆನ್ಸಿಂಗ್ ಮೂಲಕ ತೆಲಂಗಾಣದ ಹೈದರಾಬಾದ್‌ನಲ್ಲಿರುವ ಸ್ಕೈರೂಟ್‌ನ ಇನ್ಫಿನಿಟಿ ಕ್ಯಾಂಪಸ್ ಅನ್ನು ಉದ್ಘಾಟಿಸಿ ಮಾತನಾಡಿದ ಅವರು, ಈ ಸುಧಾರಣೆಯು ಭಾರತದ ಇಂಧನ ಭದ್ರತೆ ಮತ್ತು ತಾಂತ್ರಿಕ ನಾಯಕತ್ವಕ್ಕೆ ಹೊಸ ಬಲವನ್ನು ನೀಡುತ್ತದೆ. ಸಣ್ಣ ಮಾಡ್ಯುಲರ್ ರಿಯಾಕ್ಟರ್‌ಗಳು, ಸುಧಾರಿತ ರಿಯಾಕ್ಟರ್‌ಗಳು ಮತ್ತು ಪರಮಾಣು ನಾವೀನ್ಯತೆಯಲ್ಲಿ ಅವಕಾಶಗಳನ್ನು ಸೃಷ್ಟಿಸುವ ಈ ವಲಯದಲ್ಲಿ ಖಾಸಗಿ ವಲಯಕ್ಕೆ ಬಲವಾದ ಪಾತ್ರವನ್ನು ವಹಿಸಲಾಗುತ್ತಿದೆ ಎಂದು ಪ್ರಧಾನಿ ಹೇಳಿದರು.

ಭಾರತದ ಬಾಹ್ಯಾಕಾಶ ವಲಯವು ಜಾಗತಿಕ ಹೂಡಿಕೆದಾರರಿಗೆ ಆಕರ್ಷಕ ತಾಣವಾಗುತ್ತಿದೆ. ಭಾರತದ ಬಾಹ್ಯಾಕಾಶ ವಲಯದಲ್ಲಿ ಸರ್ಕಾರ ಹಲವಾರು ಐತಿಹಾಸಿಕ ಸುಧಾರಣೆಗಳನ್ನು ಕೈಗೊಂಡಿದೆ. ಖಾಸಗಿ ನಾವೀನ್ಯತೆಗಾಗಿ ಸರ್ಕಾರ ಬಾಹ್ಯಾಕಾಶ ವಲಯವನ್ನು ತೆರೆದಿದೆ, ಇದು ನವೋದ್ಯಮಗಳು ಮತ್ತು ಉದ್ಯಮವು ದೇಶದ ವೈಜ್ಞಾನಿಕ ಪರಿಸರ ವ್ಯವಸ್ಥೆಯೊಂದಿಗೆ ನಿಕಟವಾಗಿ ಕೆಲಸ ಮಾಡಲು ಅನುವು ಮಾಡಿಕೊಡುತ್ತದೆ ಎಂದು ಅವರು ಹೇಳಿದರು.

***************

ಬಂಗಾಳಕೊಲ್ಲಿಯ ನೈಋತ್ಯ ಮತ್ತು ಶ್ರೀಲಂಕಾ ಕರಾವಳಿಯಲ್ಲಿ ಉಂಟಾದ ವಾಯುಭಾರ ಕುಸಿತದಿಂದ ದಿತ್ವಾ ಚಂಡಮಾರುತ ತೀವ್ರಗೊಂಡಿದೆ.

ಚಂಡಮಾರುತವು ಚೆನ್ನೈನ ಆಗ್ನೇಯಕ್ಕೆ ೭೦೦ ಕಿ.ಮೀ ಮತ್ತು ಪುದುಚೇರಿಯ ಆಗ್ನೇಯಕ್ಕೆ ೬೧೦ ಕಿ.ಮೀ ದೂರದಲ್ಲಿದೆ. ಇದು ಬಂಗಾಳಕೊಲ್ಲಿಯ ನೈಋತ್ಯಕ್ಕೆ ಉತ್ತರ ವಾಯುವ್ಯಕ್ಕೆ ಚಲಿಸುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

ಚಂಡಮಾರುತದಿಂದಾಗಿ ಇಂದಿನಿಂದ ಮುಂದಿನ ೨೪ ಗಂಟೆಗಳ ಕಾಲ ಕರಾವಳಿ ಜಿಲ್ಲೆಗಳಲ್ಲಿ ಮಳೆಯಾಗುವ ಸಾಧ್ಯತೆಯಿದೆ.

ಇದೇ ೨೯ ಹಾಗೂ ೩೦ ರಂದು ಬೆಂಗಳೂರು ಸೇರಿದಂತೆ ಕರ್ನಾಟಕದ ಹಲವೆಡೆ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ನಿರ್ದೇಶಕ ಡಾ.ಸಿ.ಎಸ್.ಪಾಟೀಲ್ ಮುನ್ನೆಚ್ಚರಿಕೆ ನೀಡಿದ್ದಾರೆ.

ಧ್ವನಿ: ಡಾ.ಸಿ.ಎಸ್.ಪಾಟೀಲ್

***************

ರಾಷ್ಟ್ರಪತಿ ದ್ರೌಪದಿ ಮುರ್ಮು ಡಿಸೆಂಬರ್ ೩ ರಂದು ಕೇರಳಕ್ಕೆ ಭೇಟಿ ನೀಡಲಿದ್ದು, ನೌಕಾಪಡೆಯ ದಿನಾಚರಣೆಯಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಲಿದ್ದಾರೆ ಮತ್ತು ಕಾರ್ಯಾಚರಣೆಯ ಪ್ರದರ್ಶನವನ್ನು ವೀಕ್ಷಿಸಲಿದ್ದಾರೆ.

ತಿರುವನಂತಪುರಂ ಬಳಿಯ ಶಂಗುಮುಖಂ ಬೀಚ್‌ನಲ್ಲಿ ನಡೆಯಲಿರುವ ಈ ಕಾರ್ಯಕ್ರಮವನ್ನು ನೌಕಾಪಡೆಯ ಮುಖ್ಯಸ್ಥ ಅಡ್ಮಿರಲ್ ದಿನೇಶ್ ಕೆ. ತ್ರಿಪಾಠಿ ಆತಿಥ್ಯ ವಹಿಸಲಿದ್ದಾರೆ. ಈ ಪ್ರದರ್ಶನವು ಭಾರತೀಯ ನೌಕಾಪಡೆಯ ಸಾಮರ್ಥ್ಯ ಮತ್ತು ಶಕ್ತಿಯನ್ನು ಪ್ರದರ್ಶಿಸುತ್ತದೆ.

***************

ಗೋವಾದಲ್ಲಿ ನಡೆಯುತ್ತಿರುವ ೫೬ನೇ ಭಾರತೀಯ ಅಂತಾರಾಷ್ಟ್ರೀಯ ಚಲನಚಿತ್ರೋತ್ಸವದಲ್ಲಿ ಇಂದು ಗೋವಾ ಮುಖ್ಯಮಂತ್ರಿ ಪ್ರಮೋದ್ ಸಾವಂತ್ ಪ್ರಸಿದ್ಧ ಛಾಯಾಗ್ರಾಹಕ ಮತ್ತು ಚಲನಚಿತ್ರ ನಿರ್ಮಾಪಕ ಕೆ ವೈಕುಂಠ್ ಅವರ ಗೌರವಾರ್ಥವಾಗಿ ಸ್ಮರಣಾರ್ಥ ಅಂಚೆಚೀಟಿ ಬಿಡುಗಡೆ ಮಾಡಿದರು.

ಸ್ಮರಣಾರ್ಥ ಅಂಚೆಚೀಟಿ ಬಿಡುಗಡೆ ಮಾಡಿದ ಸಾವಂತ್, ಗೋವಾ ಚಲನಚಿತ್ರಗಳೊಂದಿಗೆ ಸಂಬಂಧ ಹೊಂದುವ ಮೊದಲೇ ಕೆ ವೈಕುಂಠ್ ಭಾರತೀಯ ಚಿತ್ರರಂಗದಲ್ಲಿ ಒಂದು ಛಾಪು ಮೂಡಿಸಿದ್ದಾರೆ ಎಂದು ಹೇಳಿದರು.

"ಈ ಸಂದರ್ಭದಲ್ಲಿ, ಶ್ರೀ ವೈಕುಂಠ್ ಅವರ ೧೯೭೭ ರ ಸಾಕ್ಷ್ಯಚಿತ್ರ - 'ಗೋವಾ ಮಾರ್ಚಸ್ ಆನ್' ಅನ್ನು ಸಹ ಪ್ರದರ್ಶಿಸಲಾಯಿತು.

ತಕಾಶಿ ಮಿಯಿಕೆ ನಿರ್ದೇಶನದ ಜಪಾನಿನ ಕ್ರೈಮ್ ಥ್ರಿಲ್ಲರ್ "ಶಾಮ್" ಇಂದು 'ಅಂತಾರಾಷ್ಟ್ರೀಯ ಸ್ಪರ್ಧೆ' ವಿಭಾಗದಲ್ಲಿ ಪ್ರಥಮ ಪ್ರದರ್ಶನಗೊಂಡಿತು. ವಿದ್ಯಾರ್ಥಿಯನ್ನು ಬೆದರಿಸಿದ ಆರೋಪ ಹೊತ್ತ ಶಿಕ್ಷಕಿಯೊಬ್ಬರ ನೈಜ ಕಥೆಯನ್ನು ಆಧರಿಸಿದ ಈ ನಾಟಕ-ಥ್ರಿಲ್ಲರ್ ಅನ್ನು ಪತ್ರಕರ್ತೆ ಮಸುಮಿ ಫುಕುಡಾ ಅವರ ಕೃತಿಯನ್ನು ಆಧರಿಸಿದೆ.

***************

ದೇಶದ ಘನತೆಗೆ ಕುಂದು ತರುವ ಉದ್ದೇಶದಿಂದ ಕಾಂಗ್ರೆಸ್ ಪಕ್ಷ ತಪ್ಪು ಮಾಹಿತಿಯನ್ನು ಹರಡುತ್ತಿದೆ ಎಂದು ಬಿಜೆಪಿ ಇಂದು ಆರೋಪಿಸಿದೆ.

ನವದೆಹಲಿಯಲ್ಲಿ ಸುದ್ದಿಗಾರರೊಂದಿದಗೆ ಮಾತನಾಡಿದ ಬಿಜೆಪಿ ವಕ್ತಾರ ಸಂಬಿತ್ ಪಾತ್ರ, ೨೦೧೪ ರಿಂದ ಕಾಂಗ್ರೆಸ್ ಪಕ್ಷ, ಅದರ ಸಾಮಾಜಿಕ ಮಾಧ್ಯಮ ತಂಡ ಮತ್ತು ಎಡಪಕ್ಷಗಳ ಪ್ರಸಿದ್ಧ ಮುಖಗಳು ದೇಶ ಮತ್ತು ಪ್ರಧಾನಿ ನರೇಂದ್ರ ಮೋದಿ ವಿರುದ್ಧ ಸುಳ್ಳು ನಿರೂಪಣೆಯನ್ನು ಹರಡುತ್ತಿವೆ ಎಂದು ಆರೋಪಿಸಿದರು. ಅವರು ವಿದೇಶದಿಂದ ತಮ್ಮ ಖಾತೆಗಳನ್ನು ನಿರ್ವಹಿಸುತ್ತಿದ್ದಾರೆ ಎಂದು ಸಂಬಿತ್ ಪಾತ್ರ ಹೇಳಿದ್ದಾರೆ.

ವಿಶೇಷ ತೀವ್ರ ಪರಿಷ್ಕರಣೆ ಬಗ್ಗೆ ಸುಳ್ಳು ನಿರೂಪಣೆಯನ್ನು ರೂಪಿಸಲು ವಿರೋಧ ಪಕ್ಷಗಳು ವಿದೇಶಿ ಸಾಮಾಜಿಕ ಮಾಧ್ಯಮ ಹ್ಯಾಂಡಲ್‌ಗಳನ್ನು ಬಳಸಿಕೊಂಡಿವೆ ಎಂದು ಅವರು ಆರೋಪಿಸಿದ್ದಾರೆ.

***************

ಜವಳಿ ಕ್ಷೇತ್ರಕ್ಕೆ ಕೇಂದ್ರೀಕೃತ ಸಂಶೋಧನೆ, ಮೌಲ್ಯಮಾಪನ, ಮೇಲ್ವಿಚಾರಣೆ, ಯೋಜನೆ ಮತ್ತು ಸ್ಟಾರ್ಟ್‌ಅಪ್‌ಗಳ- ಟೆಕ್ಸ್-ರ್‍ಯಾಂಪ್ಸ್ ಯೋಜನೆಗೆ ಸರ್ಕಾರ ಇಂದು ಅನುಮೋದನೆ ನೀಡಿದೆ.

ಭಾರತದ ಜವಳಿ ವಲಯವನ್ನು ಸಬಲೀಕರಣಗೊಳಿಸಲು ಟೆಕ್ಸ್-ರ್‍ಯಾಂಪ್ಸ್ ಯೋಜನೆಯು ಸಂಶೋಧನೆ, ದತ್ತಾಂಶ ಮತ್ತು ನಾವೀನ್ಯತೆಗಳನ್ನು ಒಟ್ಟುಗೂಡಿಸುತ್ತದೆ ಎಂದು ಜವಳಿ ಖಾತೆ ಸಚಿವ ಗಿರಿರಾಜ್ ಸಿಂಗ್ ಹೇಳಿದರು.

ಈ ಯೋಜನೆಯು ಸುಸ್ಥಿರತೆ, ತಂತ್ರಜ್ಞಾನ ಮತ್ತು ಸ್ಪರ್ಧಾತ್ಮಕತೆಯಲ್ಲಿ ರಾಷ್ಟ್ರವನ್ನು ಜಾಗತಿಕ ನಾಯಕನನ್ನಾಗಿ ಮಾಡುತ್ತದೆ ಎಂದು ಅವರು ಹೇಳಿದರು. ೨೦೨೫-೨೬ ರಿಂದ ೨೦೩೦-೩೧ ರ ಆರ್ಥಿಕ ವರ್ಷಕ್ಕೆ ಒಟ್ಟು ಮುನ್ನೂರ ಐದು ಕೋಟಿ ರೂಪಾಯಿಗಳ ವೆಚ್ಚವನ್ನು ಹೊಂದಿರುವ ಈ ಯೋಜನೆಯು ಮುಂಬರುವ ಹಣಕಾಸು ಆಯೋಗಕ್ಕೆ ಹೊಂದಿಕೆಯಾಗುತ್ತದೆ ಮತ್ತು ಕೇಂದ್ರ ವಲಯ ಯೋಜನೆಯಾಗಿ ಜಾರಿಗೆ ತರಲಾಗುವುದು ಎಂದು ಜವಳಿ ಸಚಿವಾಲಯ ತಿಳಿಸಿದೆ.

***************

ತೆರಿಗೆದಾರರು ದಂಡ ತಪ್ಪಿಸಲು ಮತ್ತು ರಿಟರ್ನ್‌ಗಳನ್ನು ಸ್ವಯಂಪ್ರೇರಿತವಾಗಿ ಆದಾಯವನ್ನು ಪರಿಶೀಲಿಸಿ ಸಲಹೆ ನೀಡುವ ವಿಶೇಷ ಅಭಿಯಾನವನ್ನು ಮುಂದಿನ ತಿಂಗಳ ೩೧ ರವರೆಗೆ ಕೇಂದ್ರ ನೇರ ತೆರಿಗೆ ಮಂಡಳಿ ಹಮ್ಮಿಕೊಂಡಿದೆ.

ಈ ಅಭಿಯಾನ ವಿದೇಶಿ ಆಸ್ತಿಗಳ ಪರಿಚ್ಛೇದ ಮತ್ತು ವಿದೇಶಿ ಮೂಲದ ಆದಾಯ ತೆರಿಗೆ ರಿಟರ್ನ್ಸ್‌ ಅನ್ನು ಸುಗಮಗೊಳಿಸಲಿದೆ.

********ಮುಕ್ತಾಯ*******